ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

15

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE 12/9/2020

# ಬಿಎಸ್‌ವೈ ವಿರುದ್ಧದ ಪ್ರಕರಣ ರದ್ದುಪಡಿಸಿದ ಹೈಕೋರ್ಟ್

12/9/20

**ಬೆಂಗಳೂರು:** ಗೋಕಾಕ್ ಉಪಚುನಾವಣೆ ವೇಳೆ ನೀತಿ ಸಂಹಿತೆ ಉಲ್ಲಂಘಿಸಿ ಚುನಾವಣಾ ಪ್ರಚಾರ ನಡೆಸಿದ ಆರೋಪದಲ್ಲಿ ಮುಖ್ಯ ಮಂತ್ರಿ ಬಿ.ಎಸ್. ಯಡಿಯೂರಪ್ಪ ವಿರುದ್ಧ ದಾಖಲಾಗಿದ್ದ ಪ್ರಕರಣವನ್ನು ಹೈಕೋರ್ಟ್ ರದ್ದುಪಡಿಸಿದೆ.



ಚುನಾವಣಾ ನೀತಿ ಸಂಹಿತೆ ಉಲ್ಲಂಘನೆ ಪ್ರಕರಣ ಮತ್ತದರ ಸಂಬಂಧ ಗೋಕಾಕ್ ಜೆಎಂಎಸ್‌ಸಿ ನ್ಯಾಯಾಲಯ ಜಾರಿಗೊಳಿಸಿದ್ದ ಸಮನ್ಸ್ ರದ್ದುಕೋರಿ ಬಿ.ಎಸ್. ಯಡಿಯೂರಪ್ಪ ಸಲ್ಲಿಸಿದ್ದ ಅರ್ಜಿ ವಿಚಾರಣೆಯನ್ನು ಧಾರವಾಡ ಹೈಕೋರ್ಟ್ ಪೀಠದಲ್ಲಿ ಪೂರ್ಣಗೊಳಿಸಿ ಕಾಯ್ದಿರಿಸಿದ್ದ ತೀರ್ಪನ್ನು ನ್ಯಾಯಮೂರ್ತಿ ಸೂರಜ್ ಗೋವಿಂದರಾಜ್ ಅವರಿದ್ದ ನ್ಯಾಯಪೀಠ ಶುಕ್ರವಾರ ಪ್ರಕಟಿಸಿತು.

ಮೂಲ ದೂರಿನಲ್ಲಿ ಅರ್ಜಿದಾರರ ವಿರುದ್ಧದ ಆರೋಪ ಸಾಬೀತು ಪಡಿಸುವ ಅಂಶಗಳಿಲ್ಲ, ಐಪಿಸಿ ಹಾಗೂ ಜನಪ್ರತಿನಿಧಿ ಕಾಯ್ದೆ ಅನ್ವಯವಾಗುವುದಿಲ್ಲ, ಪ್ರಕರಣದ ತನಿಖೆಗೆ ಆದೇಶಿಸುವಾಗ ಹಾಗೂ ಪೊಲೀಸರು ಸಲ್ಲಿಸಿರುವ ಬಿ ರಿಪೋರ್ಟ್ ತಿರಸ್ಕರಿಸುವಾಗ ವಿಚಾರಣಾ ನ್ಯಾಯಾಲಯ ಕಾನೂನು ಪ್ರಕ್ರಿಯೆ ಪಾಲನೆ ಮಾಡಿಲ್ಲ ಎಂದು ಅಭಿಪ್ರಾಯ ವ್ಯಕ್ತಪಡಿಸಿರುವ ಹೈಕೋರ್ಟ್, ಯಡಿಯೂರಪ್ಪ ವಿರುದ್ಧದ ಮೂಲ ದೂರು, ಜೆಎಂಎಫ್‌ಸಿ ನ್ಯಾಯಾಲಯದ ವಿಚಾರಣೆ ಹಾಗೂ ಸಮನ್ಸ್ ರದ್ದುಪಡಿಸಿ ಆದೇಶಿಸಿದೆ.